ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಬಿ.ಬಿ.ಎಂ.ಪಿ ವ್ಯಾಪ್ತಿಯ ಪ್ರಥಮ ದರ್ಜೆ ಕಾಲೇಜುಗಳ ಕುರಿತು

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)

399 (437) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಪ್ರಥಮ ದರ್ಜೆ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ಪಾಲಿಕೆ ವ್ಯಾಪ್ತಿಯ ಕಾಲೇಜುಗಳಿಗೆ ಅನುಮೋದನೆ ನೀಡಿರುವ ಖಾಯಂ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಅನುಮೋದಿತ ಖಾಯಂ ಉಪನ್ಯಾಸಕರ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಇ) ಅನುಮೋದಿತ ಖಾಯಂ ಉಪನ್ಯಾಸಕರುಗಳ ಹುದ್ದೆಗಳು ನಿವೃತ್ತಿಯಿಂದ ವರ್ಗಾವಣೆಯಿಂದ ತೆರವಾಗಿದ್ದಲ್ಲಿ ಖಾಲಿ ಹುದ್ದೆಗಳನ್ನು ತುಂಬಲು ಪಾಲಿಕೆ ಕೈಗೊಂಡ ಕ್ರಮವೇನು ;

(ಈ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಅರ್ಹ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿದ್ದರೆ, ಅವರುಗಳ ಸೇವಾ ಸಕ್ರಮಾತಿ ಬಗ್ಗೆ ಪಾಲಿಕೆ ಕೈಗೊಂಡಿರುವ ಕ್ರಮಗಳೇನು?